ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 13-07-2017

# ಪತ್ರಿಕಾ ಆಮಂತ್ರಣ

## 1. KARPHILEX 2017 Philatelic Exhibition

**Inauguration:**
**Dr. Charles Lobo,**
**Chief Postmaster General, Karnataka Circle**
**Date: 14-7-2017 Friday at 10.00 A.M.**
**Venue:** Sri Raja Rajeshwari Kalyana Mantap, Dr. Rajkumar Road, Near Navrang Theater, Rajajinagar, Bengaluru-560 010.

## ಮುಖ್ಯಮಂತ್ರಿಗಳ ಪ್ರವಾಸ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜುಲೈ 14 ಮತ್ತು 15 ರಂದು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ.

ಜುಲೈ 14 ರಂದು ಬೆಳಿಗ್ಗೆ 10-30 ಗಂಟೆಗೆ ನಂದಿನಿ ಬಡಾವಣೆ, ಆವಲಹಳ್ಳಿ ಟಿ. ನರಸೀಪುರ ಮುಖ್ಯ ರಸ್ತೆ, ಮೈಸೂರು ಇಲ್ಲಿ ಶ್ರೀ ನಿರ್ವಾಣಸ್ವಾಮಿ ಪದವಿಪೂರ್ವ ಕಾಲೇಜು ಪ್ರೌಢಶಾಲೆ ಮತ್ತು ಕಾನ್ವೆಂಟ್ ಕಟ್ಟಡದ ಉದ್ಘಾಟನೆ ಮಾಡುವರು.

ಅಂದು ಬೆಳಿಗ್ಗೆ 11-15 ಗಂಟೆಯಿಂದ ನಂಜನಗೂಡು ತಾಲ್ಲೂಕು ಹೊಸಕೋಟೆ ಗ್ರಾಮ, ಸುತ್ತೂರು ಗ್ರಾಮ, ಕೊಂತಯ್ಯ ಹುಂಡಿ ಗ್ರಾಮ, ತಗಡೂರು ಗ್ರಾಮ, ಕುದೇರು ಗ್ರಾಮ, ಉಮ್ಮತ್ತೂರು ಹಾಗೂ ಮೈಸೂರು ನಗರದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ/ಚಾಲನೆ ನೀಡುವರು.

ಜುಲೈ 15 ರಂದು ಬೆಳಿಗ್ಗೆ 10-00 ಗಂಟೆಗೆ ಕಲಾ ಮಂದಿರ, ಮೈಸೂರು ಇಲ್ಲಿ ವಿಶ್ವ ಯುವ ಕೌಶಲ್ಯ ದಿನಾಚರಣೆ ಅಂಗವಾಗಿ ಐ.ಟಿ.ಐ. ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಸ್ಕೂಲ್ ಕಿಟ್ ವಿತರಣೆ ಮಾಡುವರು. ಬೆಳಿಗ್ಗೆ 11-00 ಗಂಟೆಗೆ ಕೃಷ್ಣರಾಜ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿವತಿಯಿಂದ ಪ್ರಧಾನ ಮಂತ್ರಿಗಳ ಆವಾಸ ಯೋಜನೆಯಡಿ

ಮನೆಗಳ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸುವರು. ಬೆಳಿಗ್ಗೆ 11-45 ಗಂಟೆಗೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಆಯೋಜಿಸಿರುವ ಫಲಾನುಭವಿಗಳಿಗೆ ವಸತಿ ಗೃಹಗಳ ಹಂಚಿಕೆ ಕಾರ್ಯಕ್ರಮ ನೆರವೇರಿಸುವರು. ಮಧ್ಯಾಹ್ನ 12-30 ಗಂಟೆಗೆ ಹಿನಕಲ್ ಸಮೀಪ ವಿಜಯನಗರ 2 ನೇ ಹಂತ , ಮೈಸೂರು ಇಲ್ಲಿ ಎ.ಪಿ.ಎಂ.ಸಿ. ವತಿಯಿಂದ ಭಾನುವಾರ ಸಂತೆ ಕಟ್ಟಡ, ಕ್ಲೀನಿಂಗ್, ಪ್ಯಾಕಿಂಗ್ ಘಟಕ ಉದ್ಘಾಟಿಸುವರು. 1.00 ಗಂಟೆಗೆ ವಕ್ಫ್ ಸಂಸ್ಥೆಯ ರಬ್ಬಾನಿ ವಾಣಿಜ್ಯ ಸಂಕೀರ್ಣ ಉದ್ಘಾಟನೆ, 2-30 ಗಂಟೆಗೆ, ಆನಂದೂರು ಏತ ನೀರಾವರಿ, ಕೆರೆಗಳಿಗೆ ನೀರು ತುಂಬಿಸುವ ಕಾರ್ಯಕ್ರಮ ಶಂಕುಸ್ಥಾಪನೆ ನೆರವೇರಿಸುವರು. ಮಧ್ಯಾಹ್ನ 3-00 ಗಂಟೆಗೆ ಸಾಗರ ಕಟ್ಟೆ, ಮೈಸೂರು ಇಲ್ಲಿ ಸಾಗರ ಕಟ್ಟೆ -ಸೇತುವೆ ಉದ್ಘಾಟನೆ ಹಾಗೂ ಸಾರ್ವಜನಿಕ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 5-00 ಗಂಟೆಗೆ ಮೂಡಾ ಕಛೇರಿ, ಆವರಣ, ಮೈಸೂರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಆಯೋಜಿಸಿರುವ ಸಿ.ಎ. ನಿವೇಶನಗಳ ವಿತರಣಾ ಕಾರ್ಯಕ್ರಮ ಸಂಜೆ 5-30 ಗಂಟೆಗೆ ಚಾಮುಂಡಿ ವಿಹಾರ ಕ್ರೀಡಾಂಗಣ, ಮೈಸೂರು ಇಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಿರುವ "ಈಜು ಕೊಳದ ಉದ್ಘಾಟನೆ" ಮತ್ತು ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡುವರು.

ಜುಲೈ 15 ರಂದು ರಾತ್ರಿ ಮುಖ್ಯಮಂತ್ರಿಯವರು ಕೇಂದ್ರಸ್ಥಾನಕ್ಕೆ ಹಿಂತಿರುಗಲಿದ್ದಾರೆ.

ಎಸ್‌ಎಂ:ಜಿಪಿಆರ್.

## ಅನುಯಾಯಿ ಹುದ್ದೆಗಳ ಸಂದರ್ಶನ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಪೊಲೀಸ್ ತರಬೇತಿ ಶಾಲೆ, ಥಣಿಸಂದ್ರ, ಬೆಂಗಳೂರು ಇಲ್ಲಿ ಖಾಲಿ ಇರುವ 21 ಅನುಯಾಯಿ ಹುದ್ದೆಗಳ ಲಿಖಿತ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಮತ್ತು ರೋಸ್ಟರ್‌ಗೆ ಅನುಗುಣವಾಗಿ 1:5 ಅನುಪಾತದಲ್ಲಿ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜುಲೈ 17, 18 ಹಾಗೂ 19 ರಂದು ಮೂರು ದಿನಗಳ ಕಾಲ ಬೆಳಿಗ್ಗೆ 11.00 ಗಂಟೆಗೆ ನೈಪುಣ್ಯತಾ ಪರೀಕ್ಷೆಯ ಸಂದರ್ಶನ ಏರ್ಪಡಿಸಲಾಗಿದೆ.

ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಂದರ್ಶನ ಪತ್ರವನ್ನು ಈಗಾಗಲೇ ಕಳುಹಿಸಲಾಗಿದ್ದು, ತಪ್ಪದೇ ಹಾಜರಾಗಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ಅನ್ನು ನೋಡಬಹುದಾಗಿದೆ.

ಎಸ್‌ಎಂ:ಜಿಪಿಆರ್.

## ಕೆ.ಓ.ಎಸ್. ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ಜೂನ್ – 2017 ರ ಮಾಹೆಯಲ್ಲಿ ನಡೆಸಿದ ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್. ಪೂರಕ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ರಾಜ್ಯದ ಸಂಬಂಧಿಸಿದ ಡಯಟ್‌ಗಳಿಗೆ ಕಳುಹಿಸಲಾಗಿದೆ. ಸಂಬಂಧಿಸಿದ ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್. ಕಲಿಕಾ ಕೇಂದ್ರಗಳ ಸಮನ್ವಯಾಧಿಕಾರಿಗಳು ಆಯಾ ಡಯಟ್‌ಗಳಿಂದ ಫಲಿತಾಂಶ ಪಟ್ಟಿಯನ್ನು ಪಡೆದು ಜುಲೈ 14 ರಂದು ಬೆಳಿಗ್ಗೆ 10.00 ಗಂಟೆಗೆ ಫಲಿತಾಂಶವನ್ನು ಆಯಾ ಕರ್ನಾಟಕ ಮುಕ್ತ ಶಾಲೆ – ಕೆ.ಓ.ಎಸ್. ಕಲಿಕಾ ಕೇಂದ್ರಗಳಲ್ಲಿ ಪ್ರಕಟಿಸಲು ನಿರ್ದೇಶಕರು (ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಂ::ಜಿಪಿಆರ್.

# ಅಭ್ಯರ್ಥಿಗಳ ಅರ್ಹತಾ ಪಟ್ಟಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ರಾಜ್ಯ ಲೆಕ್ಕಪತ್ರ ಮತ್ತು ಲೆಕ್ಕ ಪರಿಶೋಧನಾ ಇಲಾಖೆಯಲ್ಲಿನ ಲೆಕ್ಕ ಸಹಾಯಕರ 445 (421+24 ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಜುಲೈ 11 ರಂದು ಮತ್ತು ಕೃಷಿ ಮಾರಾಟ ಇಲಾಖೆಯಲ್ಲಿನ ಮಾರುಕಟ್ಟೆ ಮೇಲ್ವಿಚಾರಕರ 5 (ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಜುಲೈ 12 ರಂದು ಹಾಗೂ ಕರ್ನಾಟಕ ಸರ್ಕಾರ ಸಚಿವಾಲಯದ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯಲ್ಲಿನ ಪ್ರರೂಪಣಾ ಸಹಾಯಕರು, ಕಾನೂನು ಮಾಪನಶಾಸ್ತ್ರ ಇಲಾಖೆಯಲ್ಲಿ ಕಾನೂನು ಮಾಪನ ಶಾಸ್ತ್ರ ನಿರೀಕ್ಷಕರು, ಪೌರಾಡಳಿತ ನಿರ್ದೇಶನಾಲಯದಲ್ಲಿ (ಮಹಾನಗರಪಾಲಿಕೆ) ಆಹಾರ ನಿರೀಕ್ಷಕರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಲ್ಲಿ ಕಂಪ್ಯೂಟರ್ ಆಪರೇಟರ್, ಪೌರಾಡಳಿ ಇಲಾಖೆಯಲ್ಲಿನ ಮಹಾನಗರಪಾಲಿಕೆಗಳ ಪ್ರಥಮ ದರ್ಜೆ ಕಂದಾಯ ನಿರೀಕ್ಷಕರು ಮತ್ತು ಪೌರಾಡಳಿತ ಇಲಾಖೆಯಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪ್ರಥಮ ದರ್ಜೆ ಕಂದಾಯ ನಿರೀಕ್ಷಕರ ಹುದ್ದೆಗಳ 1:2 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ

ಎಸ್‌ಎಂ:ಜಿಪಿಆರ್.

# ಮನೆಯಂಗಳದಲ್ಲಿ ಮಾತುಕತೆ –

ಪ್ರಖ್ಯಾತ ಹಿಂದೂಸ್ಥಾನಿ ಸಂಗೀತ ಕಲಾವಿದ ಪಂಡಿತ್ ರಾಜಶೇಖರ ಮನ್ಸೂರ್ ತಿಂಗಳ ಅತಿಥಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ ಜುಲೈ 15 ರ ಶನಿವಾರದಂದು ಸಂಜೆ 4.00 ಗಂಟೆಗೆ ನಗರದ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ "ನಯನ ಸಭಾಂಗಣ" ದಲ್ಲಿ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಪ್ರಖ್ಯಾತ ಹಿಂದೂಸ್ಥಾನಿ ಸಂಗೀತ ಕಲಾವಿದರಾದ ಪಂಡಿತ್ ರಾಜಶೇಖರ ಮನ್ಸೂರ್ ಅವರು ಈ ತಿಂಗಳ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಇದೇ ಸಂದರ್ಭದಲ್ಲಿ ಸಂಜೆ 3.00 ಗಂಟೆಗೆ ಬೆಂಗಳೂರಿನ ಶ್ರೀಮತಿ ಶಶಿಕಲಾ ಮತ್ತು ಪೂರ್ಣಿಮಾ ಸಹೋದರಿಯರಿಂದ ವಚನ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

# ಬೆಳ್ಳಿ ಸಿನಿಮಾ ಬೆಳ್ಳಿ ಮಾತು ಕಾರ್ಯಕ್ರಮದಲ್ಲಿ "ಕೌದಿ"

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ (ಜುಲೈ 15 ) ರ ಸಂಜೆ 4.00 ಗಂಟೆಗೆ ನಗರದ ಮಿಲ್ಲರ್ಸ್ ರಸ್ತೆಯಲ್ಲಿರುವ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಹಮ್ಮಿಕೊಂಡಿರುವ "ಬೆಳ್ಳಿ ಸಿನಿಮಾ ಬೆಳ್ಳಿ ಮಾತು" ದಲ್ಲಿ "ಕೌದಿ" ಚಲನಚಿತ್ರವನ್ನು ಪ್ರದರ್ಶಿಸಲಾಗುವುದು ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಅಂದು ಚಲನಚಿತ್ರ ನಿರ್ದೇಶಕ ರವೀಂದ್ರನಾಥ ಸಿರಿವರ ಅವರಿಂದ ಬೆಳ್ಳಿಮಾತು ಅಲ್ಲದೆ ಹಿರಿಯ ಹಾಗೂ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಡಾ. ಬಿ. ಜಯಶ್ರೀ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್. ಜಿ. ಸಿದ್ದರಾಮಯ್ಯ ಹಾಗೂ ಹಿರಿಯ ಸಂಗೀತ ನಿರ್ದೇಶಕ ಹಂಸಲೇಖ ಹಾಗೂ ಕನ್ನಡ ಸರ್ಕಲ್ (ಕೌದಿ ಚಿತ್ರ ನಿರ್ಮಾಣ ತಂಡ) ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

# ಯಕ್ಷಗಾನ ಮತ್ತು ಬಯಲಾಟ ತರಬೇತಿ ಶಿಬಿರ – ಹಿರಿಯ ಕಲಾವಿದರಿಂದ ಅರ್ಜಿ ಆಹ್ವಾನ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ಕರ್ನಾಟಕ ಮತ್ತು ಬಯಲಾಟ ಅಕಾಡೆಮಿಯು 2017-18 ನೇ ಸಾಲಿನಲ್ಲಿ ವಿಶೇಷ ಘಟಕ ಮತ್ತು ಗಿರಿಜನ ಉಪಯೋಜನೆಯಡಿ ಕಲಾ ಶಿಬಿರ ನಡೆಸಲು ಯಕ್ಷಗಾನ ಮತ್ತು ಬಯಲಾಟ ಕಲಾಪ್ರಕಾರಗಳಲ್ಲಿ (ತೆಂಕುತಿಟ್ಟು/ಬಡಗುತಿಟ್ಟು ಯಕ್ಷಗಾರ, ಮೂಡಲಪಾಯ ಯಕ್ಷಗಾನ, ಶ್ರೀಕೃಷ್ಣಪಾರಿಜಾತ, ದೊಡ್ಡಾಟ ಸಣ್ಣಾಟ, ಘಟ್ಟದಕೋರೆ, ತೊಗಲುಗೊಂಬೆಯಾಟ, ಸೂತ್ರದಗೊಂಬೆಯಾಟ, ಸಲಾಕೆಗೊಂಬೆಯಾಟ) ತರಬೇತಿ ನೀಡಬಯಸುವ ಹಿರಿಯ ಕಲಾವಿದರಿಂದ ಅರ್ಜಿ ಆಹ್ವಾನಿಸಿದೆ.

ಅರ್ಜಿ ನಮೂನೆ ಪ್ರತಿಯನ್ನು ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಿಂದ ಪಡೆದು, ಭರ್ತಿಮಾಡಿದ ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, ಕನ್ನಡ ಭವನ, ಎರಡನೇ ಮಹಡಿ, ಚಾಲುಕ್ಯ ವಿಭಾಗ, ಜೆ.ಸಿ.ರಸ್ತೆ, ಬೆಂಗಳೂರು – 560 002 ಇವರಿಗೆ ಕಳಹಿಸಿಕೊಡಬೇಕು.

ಅರ್ಜಿ ಸಲ್ಲಿಸಲು ಜುಲೈ 21 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 080– 22113146 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಆರು ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ತರಬೇತಿ

**ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)**

ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿ ಕೇಂದ್ರ (ಇಂಡೋ-ಡ್ಯಾನಿಷ್ ಫಾರಂ) ಹೆಸರಘಟ್ಟ, ಬೆಂಗಳೂರು – 560 088 ರಲ್ಲಿ ಜುಲೈ 17 ರಿಂದ 22 ರವರೆಗೆ ಬೆಳಿಗ್ಗೆ 10.00 ರಿಂದ ಸಂಜೆ 4.30 ಗಂಟೆವರೆಗೆ ಹೈನುಗಾರಿಕೆ ಪ್ರಾರಂಭಿಸಲು ಆಸಕ್ತಿಯುಳ್ಳ ರೈತರಿಗೆ, ರೈತ ಮಕ್ಕಳಿಗೆ ಹಾಗೂ ರೈತ ಮಹಿಳೆಯರಿಗೆಗೆ ಆರು ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ತರಬೇತಿ ಅವಧಿಯಲ್ಲಿ ಊಟ ಮತ್ತು ಪ್ರಯಾಣದ ವೆಚ್ಚವನ್ನು ಅಭ್ಯರ್ಥಿಗಳೇ ಭರಿಸಬೇಕು. ತರಬೇತಿ ಅವಧಿಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಳ್ಳಲು ಇಚ್ಛಿಸಿದರೆ ಒಂದು ದಿನಕ್ಕೆ ರೂ 25 ರಂತೆ ವಸತಿ ಶುಲ್ಕ ಪಾವತಿಸಬೇಕಾಗಿರುತ್ತದೆ. ತರಬೇತಿ ಪಡೆಯಲು ಇಚ್ಛಿಸುವವರು ಆಧಾರ್ ಕಾರ್ಡ್ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಬಾವಚಿತ್ರಗಳೊಂದಿಗೆ ಬೆಳಿಗ್ಗೆ 9.00 ಗಂಟೆಗೆ ನೇರವಾಗಿ ತರಬೇತಿಗೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು, (ತರಬೇತಿ) ಇವರನ್ನು ನೇರವಾಗಿ ಅಥವಾ ದೂರವಾಣಿ ಮುಖೇನ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಕಚೇರಿ ದೂರವಾಣಿ ಸಂಖ್ಯೆ 080 –28466397.

ಎಸ್‌ಎಂ:ಜಿಪಿಆರ್.

## ಕೀ ಉತ್ತರ ಆಯೋಗದ ಅಂತರ್ಜಾಲದಲ್ಲಿ ಪ್ರಕಟ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತ ನಿರ್ದೇಶನಾಲಯದ ಅಲ್ಪಸಂಖ್ಯತರ ಮಾದರಿ ವಸತಿ ಶಾಲೆ (ನವೋದಯ) ಗಳಲ್ಲಿ ಪ್ರಯೋಗಾಲಯ ಸಹಾಯಕ ಮತ್ತು ವಾಸ್ತುಶಿಲ್ಪ ಇಲಾಖೆಯಲ್ಲಿನ ಆಕೃತಿ ರಚನಾಕಾರರು ಹುದ್ದೆಗಳ ನೇಮಕಾತಿಗಾಗಿ ಜುಲೈ 26 ಮತ್ತು 27 ರಂದು ಬೆಂಗಳೂರು, ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲಾ ಕೇಂದ್ರಗಳಲ್ಲಿ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ನಿರ್ದಿಷ್ಟ ಪತ್ರಿಕೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answers" ನಲ್ಲಿ ಜುಲೈ 10 ಮತ್ತು 11 ರಂದು ಪ್ರಕಟಿಸಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನದ ಪ್ರತಿ, ವಿಷಯ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50/ ರ ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) "ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ನಿಗದಿತ ನಮೂನೆಯಲ್ಲಿ ಜುಲೈ 17 ಮತ್ತು 18 ರೊಳಗೆ (ಕಚೇರಿ ವೇಳೆಯಲ್ಲಿ) ಲಿಖಿತ ಮನವಿಯ ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ಜುಲೈ 17 ಮತ್ತು 18 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜಿಪಿಆರ್.

# ಕೀ ಉತ್ತರ ಆಯೋಗದ ಅಂತರ್ಜಾಲದಲ್ಲಿ ಪ್ರಕಟ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತತ ನಿರ್ದೇಶನಾಲಯದ ಅಲ್ಪಸಂಖ್ಯಾತರ ಮಾದರಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉರ್ದು ಉಪನ್ಯಾಸಕರು, ಜೀವಶಾಸ್ತ್ರ ಉಪನ್ಯಾಸಕರು, ರಸಾಯನಶಾಸ್ತ್ರ ಉಪನ್ಯಾಸಕರು, ಅರ್ಥಶಾಸ್ತ್ರ ಉಪನ್ಯಾಸಕರು, ಔಷಧ ನಿಯಂತ್ರಣ ಇಲಾಖೆಯಲ್ಲಿನ ಜೂನಿಯರ್ ಸೈಂಟಿಫಿಕ್ ಆಫೀಸರ್, ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿನ ಭೂವಿಜ್ಞಾನಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮತ್ತು ಅಧೀಕ್ಷಕರು ದರ್ಜೆ –1, ಪೌರಾಡಳಿತ ನಿರ್ದೇಶನಾಲಯದ ಮಹಾನಗರ ಪಾಲಿಕೆಗಳಲ್ಲಿನ ಸಹಾಯಕ ಅಭಿಯಂತರರು (ಎಲೆಕ್ಟ್ರಿಕಲ್) ಹುದ್ದೆಗಳ ನೇಮಕಾತಿಗಾಗಿ ದಿನಾಂಕ : 26–05–2017 ರಂದು ಬೆಂಗಳೂರು, ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲಾ ಕೇಂದ್ರಗಳಲ್ಲಿ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ನಿರ್ದಿಷ್ಟ ಪತ್ರಿಕೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answers" ನಲ್ಲಿ ಜುಲೈ 10 ಮತ್ತು 11 ರಂದು ಪ್ರಕಟಿಸಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನದ ಪ್ರತಿ, ವಿಷಯ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50/ ರ ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) "ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ನಿಗದಿತ ನಮೂನೆಯಲ್ಲಿ ಜುಲೈ 18 ರೊಳಗೆ (ಕಚೇರಿ ವೇಳೆಯಲ್ಲಿ) ಲಿಖಿತ ಮನವಿಯ

ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ಜುಲೈ 18 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಕೀ ಉತ್ತರ ಆಯೋಗದ ಅಂತರ್ಜಾಲದಲ್ಲಿ ಪ್ರಕಟ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತತ ನಿರ್ದೇಶನಾಲಯದ ಅಲ್ಪಸಂಖ್ಯತರ ಮಾದರಿ ವಸತಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮೆಕ್ಯಾನಿಕಲ್ ವಿಭಾಗದಲ್ಲಿ ಉಪನ್ಯಾಸಕರು ಹುದ್ದೆಗಳ ನೇಮಕಾತಿಗಾಗಿ ದಿನಾಂಕ : 27-05-2016 ರಂದು ಬೆಂಗಳೂರು, ಬೆಳಗಾವಿ, ಕಲಬುರಗಿ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲಾ ಕೇಂದ್ರಗಳಲ್ಲಿ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ನಿರ್ದಿಷ್ಟ ಪತ್ರಿಕೆಯ ಕೀ ಉತ್ತರಗಳನ್ನು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Key Answers" ನಲ್ಲಿ ಜುಲೈ 10 ರಂದು ಪ್ರಕಟಿಸಿದೆ.

ಕೀ ಉತ್ತರಗಳ ಕುರಿತಂತೆ ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಅದನ್ನು ಪುಷ್ಠೀಕರಿಸುವ ಆಧಾರಗಳುಳ್ಳ ಪುಸ್ತಕಗಳ ಹೆಸರು, ಲೇಖಕರ ಹೆಸರು, ಪ್ರಕಾಶನದ ಪ್ರತಿ, ವಿಷಯ, ಪ್ರಶ್ನೆ ಸಂಖ್ಯೆ ಇತ್ಯಾದಿ ವಿವರಗಳು ಹಾಗೂ ಪ್ರತಿ ಪ್ರಶ್ನೆಗೆ ರೂ 50/ ರ ಶುಲ್ಕದೊಂದಿಗೆ (ಐಪಿಒ/ಡಿಡಿ ಮೂಲಕ) "ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ನಿಗದಿತ ನಮೂನೆಯಲ್ಲಿ ಜುಲೈ 17 ರೊಳಗೆ (ಕಚೇರಿ ವೇಳೆಯಲ್ಲಿ) ಲಿಖಿತ ಮನವಿಯ ಮೂಲಕ (ದ್ವಿಪ್ರತಿಯಲ್ಲಿ) ಸಲ್ಲಿಸಬಹುದಾಗಿದೆ. ಜುಲೈ 17 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಮೀನುಗಾರಿಕೆ ಕೇಂದ್ರಕ್ಕೆ ಸಚಿವರ ಭೇಟಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಪ್ರಮೋದ್ ಮಧ್ವರಾಜ್, ಮೀನುಗಾರಿಕೆ, ಕ್ರೀಡಾ ಮತ್ತು ಯುವಜನ ಸೇವೆ ಸಚಿವರು, ಕರ್ನಾಟಕ ಸರ್ಕಾರ ರವರು ಇತ್ತೀಚೆಗೆ ಬೆಂಗಳೂರು (ಉತ್ತರ) ತಾಲ್ಲೂಕಿನ ಹೆಸರಘಟ್ಟದಲ್ಲಿರುವ ಕೇಂದ್ರ ಸರ್ಕಾರದ ಸಂಸ್ಥೆಗಳಾದ Central Institute for Fresh water Aquaculture, Central Inland Fisheries research Institute ರಾಜ್ಯ

ಸರ್ಕಾರದ ಸಂಸ್ಥೆಗಳಾದ Karnataka Veterinary, Animal Fisheries Sciences University ಮತ್ತು ಇಲಾಖೆಯ Aquatic Quarantine Centre ನ್ನು ಪರಿವೀಕ್ಷಿಸಿದ ಕರ್ನಾಟಕದ ಪ್ರಥಮ ಮೀನುಗಾರಿಕೆ ಸಚಿವರು._ಮೇಲಿನ ಕೇಂದ್ರಿಯ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಸಂಸ್ಥೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕೈಗೊಳ್ಳಲಾದ ಸಂಶೋಧನೆಗಳ ಬಗ್ಗೆ ಸಚಿವರಿಗೆ ತಿಳಿಸಿದರು.

ಸಂಸ್ಥೆಗಳಲ್ಲಿ ಕೈಗೊಳ್ಳಲಾದ ಸಂಶೋಧನೆಗಳನ್ನು ಪರಿಣಾಮಕಾರಿಯಾಗಿ ರಾಜ್ಯದಲ್ಲಿರುವ ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಮೀನುಗಾರಿಕೆ ಇಲಾಖೆಯ ಅಧಿಕಾರಿಗಳು ರಾಜ್ಯಾದ್ಯಂತ ಸೂಕ್ತವಿರುವ ಪ್ರದೇಶಗಳಲ್ಲಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸೂಚಿಸಿದರು.

ದೇಶದ ಪ್ರಥಮ Aquatic Quarantine Centre ನ್ನು ಮೀನುಗಾರಿಕೆ ಇಲಾಖೆಯು ಹೆಸರಘಟ್ಟ ಮೀನುಮರಿ ಉತ್ಪಾದನಾ ಕೇಂದ್ರದಲ್ಲಿ ನಿರ್ಮಿಸಲಾಗಿದ್ದು, ಸಚಿವರು ಸದರಿ ಕೇಂದ್ರವನ್ನು ವೀಕ್ಷಿಸಿದರು. ಇತ್ತೀಚಿನ ದಿನಗಳಲ್ಲಿ ಅಲಂಕಾರಿಕಾ ಮೀನುಗಳ ಬೇಡಿಕೆ ಹೆಚ್ಚಾಗಿರುವುದರಿಂದ ಹೊರದೇಶಗಳಿಂದ ಅಮದು ಮಾಡಿಕೊಳ್ಳಲೇಬೇಕಾಗಿರುವ ಪರಿಸ್ಥಿತಿಯಲ್ಲಿ ಈ ಕೇಂದ್ರದ ಸ್ಥಾಪನೆಯು ರಾಜ್ಯದಲ್ಲಿರುವುದು ಅತಿ ಅವಶ್ಯಕವಾಗಿದೆ.

Karnataka Veterinary, Animal Fisheries Sciences University, ಹೆಸರಘಟ್ಟ ಕೇಂದ್ರದಲ್ಲಿ ಇತ್ತೀಚಿನ ಸಂಶೋಧನೆಯಿಂದ ಉತ್ಪಾದಿಸಲಾದ ಅಮೂರ್ ಸಾಮಾನ್ಯಗೆಂಡೆಯನ್ನು ವೀಕ್ಷಿಸಿದರು ಹಾಗೂ ಈ ಕೇಂದ್ರದಲ್ಲಿ ಕೈಗೊಳ್ಳಲಾದ ಇತರೆ ಚಟುವಟಿಕೆಗಳನ್ನು ವೀಕ್ಷಿಸಿದರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

(ಚಿತ್ರ ಲಗತ್ತಿಸಿದೆ)

## 2017 ನೇ ಕ್ಯಾಲೆಂಡರ್‌ನ “ ಡಿಜಿಟಲ್ ಅಪ್ಲಿಕೇಷನ್ ‘ ಅಭಿವೃದ್ಧಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ 2017 ನೇ ಸಾಲಿನ ಕ್ಯಾಲೆಂಡರ್‌ನ “ಡಿಜಿಟಲ್ ಅಪ್ಲಿಕೇಷನ್’ ಅನ್ನು ಅಭಿವೃದ್ಧಿಪಡಿಸಲಾಗಿದ್ದು, ಈ ಆ್ಯಪ್ ಮೂಲಕ 2017 ನೇ ಸಾಲಿನ 12 ತಿಂಗಳುಗಳ ದಿನಾಂಕ/ವಾರಗಳ ಪಟ್ಟಿ, ಸಾರ್ವತ್ರಿಕ, ನಿರ್ಬಂಧಿತ ರಜಾ ದಿನಗಳು, ವಿಶೇಷ ದಿನಾಚರಣೆಗಳು, ಅಮಾವಾಸ್ಯೆ ಹಾಗೂ ಹುಣ್ಣಿಮೆ ಇತ್ಯಾದಿ ವಿವರಗಳನ್ನು ಯಾವುದೇ ಸ್ಥಳದಲ್ಲಿ ಹಾಗೂ ಯಾವುದೇ ವೇಳೆಯಲ್ಲಿಯೂ ಅಂಗೈನಲ್ಲಿ ಪಡೆಯಬಹುದಾಗಿದೆ.

ಸದರಿ ' ಡಿಜಿಟಲ್ ಅಪ್ಲಿಕೇಷನ್ ' ಅನ್ನು Android Mobile Phone ಗಳಿಗೆ Google Playstore ಮೂಲಕ ಡೌನ್‌ಲೋಡ್ ಮಾಡಿಕೊಂಡು ಇದರ ಸುದುಪಯೋಗವನ್ನು ಸರ್ಕಾರಿ ಅಧಿಕಾರಿಗಳು/ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಪಡೆಯಬಹುದಾಗಿದೆ ಎಂದು ಮುದ್ರಣ, ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ನಿರ್ದೇಶಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ರಾಜ್ಯ ಸರ್ಕಾರ ಹಾಗೂ ಅಲೆರ್ಟ್ ಸಂಸ್ಥೆ ಒಡಂಬಡಿಕೆಗೆ ಸಹಿ

ಬೆಂಗಳೂರು, ಜುಲೈ 13 (ಕರ್ನಾಟಕ ವಾರ್ತೆ)

ದೈನಂದಿನ ಜೀವನದಲ್ಲಿ ತುರ್ತು ಸನ್ನಿವೇಶಗಳನ್ನು ಎದುರಿಸುವ ಸಾಧ್ಯತೆಗಳು ಹೆಚ್ಚಾಗಿರುವ ಗೃಹ, ಆರೋಗ್ಯ ಹಾಗೂ ಸಾರಿಗೆ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ತುರ್ತು ಸಂದರ್ಭಗಳಲ್ಲಿ ನಿರ್ವಹಿಸಬೇಕಾದ ಕಾರ್ಯಗಳ ಕುರಿತು ತರಬೇತಿ ನೀಡುವ ಒಡಂಬಡಿಕೆಗೆ ಇಂದು ಸಹಿ ಹಾಕಲಾಯಿತು.

ಅಲೆರ್ಟ್ ಸ್ವಯಂ ಸೇವಾ ಸಂಸ್ಥೆಯು ಈ ತರಬೇತಿಯನ್ನು ನಡೆಸಿಕೊಡಲಿದ್ದು, ಈ ಕಾರ್ಯಕ್ರಮದಲ್ಲಿ ಬಿ.ಎಂ.ಟಿ.ಸಿ. ವಾಹನ ಚಾಲಕರು, ಟ್ರಾಫಿಕ್ ವಾರ್ಡೆನ್, ಹೋಂಗಾಡ್, ಆಶಾ ಕಾರ್ಯಕರ್ತೆಯರು, ಸಾರ್ವಜನಿಕರಿಗೆ 'ಗೋಲ್ಡನ್ ಅವರ್ ಕೇರ್' ಮತ್ತು ತುರ್ತು ಪ್ರತಿಕ್ರಿಯೆ ಕುರಿತು ತರಬೇತಿ ನೀಡಲಾಗುವುದು. ಈ ತರಬೇತಿ ಹೊಂದಿದ ನಾಗರಿಕರಿಗೂ ಅವರ ಪರಿಣತಿಯನ್ನು ಗುರುತಿಸುವ ಕಾರ್ಡನ್ನು ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ. ಈ ಸಂದರ್ಭದಲ್ಲಿ ಸಾರಿಗೆ ಇಲಾಖೆ ಪ್ರಧಾನ ಕಾರ್ಯದರ್ಶಿ ಶ್ರೀ ಬಸವರಾಜು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮತ್ತಿತರರು ಹಾಜರಿದ್ದರು.

## Fisheries Minister visits Fisheries Institutes

Bangalore, July 13 (Karnataka Information)

The Minister for Youth Empowerment and Sports and Fisheries, Government of Karnataka, Pramod Madhvaraj visited the Central Institute of Freshwater Aquaculture (CIFA), Central Inland Fisheries Research Institute

(CIFRI), State Institute of Karnataka Veterinary Animal and Fisheries Science University (KVAFSU) and the Aquatic Quarantine Centre of the Department of Fisheries, Govt of Karnataka, in Hesaraghatta recently. He is the first Minister to visit the fisheries institutes in Hesaraghatta.

The Scientists of the institute briefed the Minister about the activities of the Institute. The minister was impressed by the projects taken up by the Institutes and wanted these achievements to reach the farmers. In this direction he suggested the officers of the Department to take these achievements' to the field by their extension activities.

The only aquatic quarantine centre of the country has been established by the Department of Fisheries at the fish seed production centre at Heseraghatta. Off late the ornamental fish trade has bloomed in the country. To meet the growing demand of exotic ornamental fish, a huge quantity of ornamental fish to the tune of Rs. 25.00 crore is imported annually into the country. To protect the natural fish fauna, micro flora and to avoid introduction of new disease causing pathogens into the country the need for establishment of aquatic quarantine centre has arisen. This facility will be commissioned shortly.

KVAFSU has developed a new strain of Amur common carp which has 30% more growth than the usual variety. The Minster suggested that this variety should be distributed to the farmers so that they can earn more revenue. Further, he also witnessed the integrated fish farm set up for demonstration by the institute says press note issued by Deputy Director of Fisheries, Bangalore.

# K.O.S. RESULTS ANNOUNCED

Bengaluru, July 13, (Karnataka Information)

Results of Karnataka Open School KOS Supplementary Examination conducted by Karnataka Secondary Education Examination Board, Bengaluru during June-2017, are sent to concerned DIET's in the State.

Concerned KOS Co-ordinators of KOS Study Centers are informed to collect the results from the DIET's and to announce the results on 14-07-2017 at 10.00 AM in the respective KOS Study Centers as per the statement of Director (Other Exams), Karnataka Secondary Education Examination Board, Bangalore.

sm/gpr

DAK ADALAT

Bangalore, July 13 (Karnataka Information)

The Chief Postmaster General, Karnataka Postal Circle, No. 1, Beaulieu, Palace Road (Opposite Maharani's College of Science) Bengalure -560 0001 will conduct a "DAK ADALAT" for redressal of public grievances relating to Postal Services on 20th July 2017 at 3.00 P.M. Members of the public and esteemed customers of Department of Posts in Bengaluru Region may address their grievances if any, to the Assistant Director (Postal Operations) O/o Chief Postmaster General, Karnataka Circle, Bengaluru 560 001, so as to reach the officer latest by 12th July 2017. Grievances can also be sent by email to tech.ta@indiapost.gov.in It is requested that brief and specific details with relevant facts and figures may please be furnished along with complete contact details to facilitate speedy redressal.

"Digital Application"

Bengaluru, July 13(Karnataka Information)

"Digital Application" for Karnataka Government Calenders 2017 has been Developed and launched. Through this App any one can get the entire information of 12 months/Date/Days of the year 2017. Details of General holidays, Restricted holidays other Special days and also inforamtion regarding Amavasya and Full moon Day is also available.

Once this App is downloaded any one can access these inforamtion at any place and at any time on hand. The Government Officials/Staff and General public may make use of this facility by downloading the Digital Application to Android Mobile Phone through Google Playstore says press release issued by Director, Department of Printing, Stationery and Publications.

# "KARPHILEX 2017"

Bengaluru, July 13(Karnataka Information)

Karnataka Philatelic Society is organizing a philatelic exhibition "KARPHILEX 2017" at Bengaluru from 14th July to 16th July 2017. This is a national level exhibition and entries from Karnataka and from outside Karnataka are also entertained. The venue for philatelic exhibition is Sri Raja Rajeshwari Kalyana Mantap, Dr. Rajkumar Road, Near Navrang Theater, Rajajinagar, Bengaluru-560 010. The aim is to promote philately in Karnataka, especially among chidlren and youth and motivate the chidlren in pursuing philately as their hobby.

The exhibition will be open from 11 A.M. to 06.00 PM. There is no entry fee fro the exhibition.

The society proposes to hold Quiz Competition on philately, Philatelic Seminars, Treasure Hunt, Walk with experts, Lucky Dip, many spot competitions and activities for all age groups. More than 20 dealers from all over India are participating.

Two special covers will be released on 14-7-2017 to mark "KARPHILEX 2017" Dr. Charles Lobo, Chief Postmaster General, Karnataka Circle will inaugurate the KARPHILEX 2017 AT 10.00 am 14 th July 2017 and will release these special covers.